Akashvani : Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

10.09.2026 18.40 hrs

---

ಮುಖ್ಯಾಂಶಗಳು

- ಬಲಿಷ್ಠ ರಾಜ್ಯ ನಿರ್ಮಾಣಕ್ಕೆ ಬದ್ಧ; ದೃಢ ಕರ್ನಾಟಕದ ಸಂಕಲ್ಪ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿಕೆ; ವಿವಿಧ ಕಾರ್ಯಕ್ರಮಗಳ ಅನಾವರಣ
- ಪ್ರತಿ ಜಿಲ್ಲೆಯಲ್ಲಿ ೫೦ ಸಾವಿರ ನಿವೇಶನ ಹಂಚಿಕೆ ಉದ್ದೇಶ - ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್
- ಪ್ರಸ್ತುತ ಸಾಲಿನ ಪದ್ಮ ಪ್ರಶಸ್ತಿ ಪುರಸ್ಕೃತರಿಗೆ ರಾಜ್ಯಪಾಲರಿಂದ ಅಭಿನಂದನೆ, ಸನ್ಮಾನ
- ಸಮರ್ಪಕ ಆಡಳಿತ ನೀಡುವಲ್ಲಿ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ವಿಫಲ; ಬಿಜೆಪಿ ಆರೋಪ; ೧೮೦ ಕಿಲೋಮೀಟರ್ ಪಾದಯಾತ್ರೆ ಬಳ್ಳಾರಿಯಲ್ಲಿ ಮುಕ್ತಾಯ

---

ಆರೋಗ್ಯ, ಶಿಕ್ಷಣ, ಜಲ ಭದ್ರತೆ, ಸಾಮಾಜಿಕ ನ್ಯಾಯ, ಬಂಡವಾಳ ಹೂಡಿಕೆ, ಉದ್ಯೋಗಕ್ಕೆ ಆದ್ಯತೆ ನೀಡುವ ಮೂಲಕ ಬಲಿಷ್ಠ ರಾಜ್ಯ ನಿರ್ಮಾಣಕ್ಕೆ ನವ ಸಂಕಲ್ಪ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡು ೧೦೦ ದಿನಗಳು ಪೂರ್ಣಗೊಂಡ ಹಿನ್ನೆಲೆಯಲ್ಲಿ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿಂದು ನಡೆದ "ದೃಢ ಕರ್ನಾಟಕದ ಸಂಕಲ್ಪ: ಶತಕದ ಪಥ, ಪ್ರಗತಿಯ ರಥ" ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮನೆರಹಿತ ಪರಿಶಿಷ್ಟರಿಗೆ ಉಚಿತ ಮನೆ ಮತ್ತು ನಿವೇಶನ, ಗ್ರಾಮೀಣ ಭಾಗದಲ್ಲಿ ನಿವೇಶನ ರಹಿತರಿಗೆ ೫ ಲಕ್ಷ ನಿವೇಶನ ವಿತರಿಸಲಾಗುವುದು. ರಸ್ತೆ ಬದಿಯಲ್ಲಿ ತೇಗದ ಸಸಿ ನೆಟ್ಟು ಅದನ್ನು ಕಾಪಾಡುವ ಜವಾಬ್ದಾರಿಯನ್ನು ರೈತರಿಗೆ ನೀq ಅದು ಬೆಳೆದು ಕಟಾವು ಬಂದಾಗ ಅದರ ಬೆಲೆಯಲ್ಲಿ ಶೇಕಡ ೭೦ರಷ್ಟು ಹಣವನ್ನು ರೈತರಿಗೆ, ನೀಡಲಾಗುವುದು ಎಂದು ಅವರು ಮಾಹಿತಿ ನೀಡಿದರು.

ಗ್ರಾಮೀಣ ಯುವಕರ ಪ್ರತಿಭೆಗೆ ಉತ್ತೇಜನ ನೀಡಲು ರಾಜ್ಯದಲ್ಲಿ ೧೦ ಸಾವಿರ ಸಂಘಗಳನ್ನು ಸ್ಥಾಪಿಸುತ್ತಿದ್ದು ವಾರ್ಷಿಕ ೧೦ ಲಕ್ಷ ರೂಪಾಯಿ ಅನುದಾನ ನೀಡಲಾಗುವುದು. ಇಂದಿನಿಂದ ಆಫ್ ಲೈನ್ ಅರ್ಜಿ ಲಭ್ಯವಾಗಲಿದ್ದು, ಕನಿಷ್ಠ ೨೫ ಲಕ್ಷ ಸದಸ್ಯರು ನೋಂದಣಿಯಾಗುವ ನಿರೀಕ್ಷೆ ಇದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ಗ್ರಾಮೀಣ ಭಾಗದಲ್ಲಿ ಪಂಚಾಯಿತಿ ಮಟ್ಟದಲ್ಲಿ ಒಂದು ಸಾವಿರ ಸರ್ಕಾರಿ ಶಾಲೆಗಳನ್ನು ಕೆಪಿಎಸ್ ಶಾಲೆಗಳನ್ನಾಗಿ ಸಿಎಸ್‌ಆರ್ ನಿಧಿಯಲ್ಲಿ ಅಭಿವೃದ್ಧಿಪಡಿಸಲಾಗುವುದು. ಈ ವರ್ಷ ವಿಶ್ವ ಬ್ಯಾಂಕ್ ನೆರವಿನೊಂದಿಗೆ ರಾಜ್ಯದಲ್ಲಿ ೧ ಸಾವಿರ ಶಾಲೆ ನಿರ್ಮಿಸಲಾಗುವುದು" ಎಂದರು.

ರಾಜ್ಯದಲ್ಲಿ ಕೈಗಾರಿಕಾ ಪ್ರಗತಿ ಸಾಧಿಸಲು ಹಿಂದುಳಿದ ತಾಲ್ಲೂಕುಗಳಲ್ಲಿ ಹೂಡಿಕೆಗೆ ವೇಗವರ್ದನಾ ಪ್ಯಾಕೇಜ್ ನೀಡಲಾಗುವುದು. ಆಧುನಿಕ ತಂತ್ರಜ್ಞಾನಕ್ಕೆ ಅನುಗುಣವಾಗಿ ಮುಂದಿನ ಪೀಳಿಗೆಯನ್ನು ತಯಾರು ಮಾಡಲು ಭಾರತದಲ್ಲಿ ಮೊದಲ ಸರ್ಕಾರಿ ಪ್ರಾಯೋಜಿತ ಕೃತಕ ಬುದ್ಧಿಮತ್ತೆ ವಿಶ್ವವಿದ್ಯಾಲಯ ಸ್ಥಾಪನೆ, ಜೊತೆಗೆ ೬ನೇ ತರಗತಿಯಿಂದ ಮಕ್ಕಳಿಗೆ ಎಐ ಶಿಕ್ಷಣ ನೀಡಲು ತೀರ್ಮಾನಿಸಲಾಗಿದೆ ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.

**** ಧ್ವನಿ ****ಮುಖ್ಯಮಂತ್ರಿ

ಕಲಬುರ್ಗಿ, ಬೆಳಗಾವಿ, ಹುಬ್ಬಳ್ಳಿ-ಧಾರವಾಡ, ಮಂಗಳೂರು ಹಾಗೂ ಮೈಸೂರಿನಲ್ಲಿ ೫ ಜಾಗತಿಕ ತಂತ್ರಜ್ಞಾನ ಕೇಂದ್ರ ಸ್ಥಾಪಿಸಲಾಗುವುದು ಎಂದು ಭರವಸೆ ನೀಡಿದರು. ಕರ್ನಾಟಕದ ಆರ್ಥಿಕತೆಯನ್ನು ೨೦೩೭ರ ವೇಳೆಗೆ ೧ ಟ್ರಿಲಿಯನ್‌ಗೆ ತಲುಪಿಸುವ ಗುರಿ ಇದೆ. ಶೇಕಡ ೫ಕ್ಕಿಂತ ಕಡಿಮೆ ಅಪೌಷ್ಟಿಕತೆ, ಮಕ್ಕಳು ಶಾಲೆ ತೊರೆಯುವಿಕೆ ಮತ್ತು ಬಡತನವನ್ನು ಶೂನ್ಯಕ್ಕೆ ಇಳಿಸುವ ಮಹಾ ಸಂಕಲ್ಪಗಳನ್ನು ಮಾಡಲಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು.

ಮೇಕೆದಾಟು ಯೋಜನೆ ಸೇರಿದಂತೆ ರಾಜ್ಯದ ಜಲ ಭದ್ರತೆಗೆ ಎಲ್ಲಾ ಕ್ರಮ ಕೈಗೊಳ್ಳಲಾಗುವುದು. ಮುಂದಿನ ದಿನಗಳಲ್ಲಿ ಲಾಲ್ ಬಾಗ್ ಮಾದರಿಯ ೫ ಉದ್ಯಾನಗಳನ್ನು ನಿರ್ಮಿಸುವ ಉದೇಶವಿದೆ. ಅರಣ್ಯ ಇಲಾಖೆ ಜಾಗಗಳಲ್ಲಿ ಈ ಯೋಜನೆ ಮಾಡಲು ಸರ್ಕಾರ ಮುಂದಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ಕಂದಾಯ ಖಾತೆ ಹೊಂದಿರುವ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಕಾರ್ಯಕ್ರಮದಲ್ಲಿ ಮಾತನಾಡಿ, ಕೇಂದ್ರದ ಮಾರ್ಗಸೂಚಿಗಳನ್ವಯ ೧೦೧ ತಾಲೂಕುಗಳನ್ನು ಬರಪೀಡಿತ ಎಂದು ಘೋಷಣೆ ಮಾಡಲಾಗಿದೆ ಇನ್ನೂ ೧೦೦ಕ್ಕೂ ಹೆಚ್ಚು ತಾಲೂಕುಗಳಲ್ಲಿ ಅಧ್ಯಯನ ನಡೆಯುತ್ತಿದ್ದು,

ಇದನ್ನು ಹಂತಹಂತವಾಗಿ ಬರಪೀಡಿತ ಎಂದು ಘೋಷಣೆ ಮಾಡಿ, ಸದ್ಯದಲ್ಲೇ ಕೇಂದ್ರ ಸರ್ಕಾರಕ್ಕೆ ಬರಪರಿಹಾರಕ್ಕಾಗಿ ಮನವಿಯನ್ನು ಸಲ್ಲಿಸಲಾಗುವುದು ಎಂದು ತಿಳಿಸಿದರು.

ಪ್ರತಿ ಜಿಲ್ಲೆಯಲ್ಲಿ ೫೦ ಸಾವಿರ ನಿವೇಶನಗಳನ್ನು ಹಂಚಿಕೆ ಮಾಡುವ ಉದ್ದೇಶ ಇದೆ. ರಾಜ್ಯಾದ್ಯಂತ ಮೊದಲ ಹಂತದಲ್ಲಿ ೫ ಲಕ್ಷ ನಿವೇಶನಗಳನ್ನು ಮುಂದಿನ ಎರಡು ತಿಂಗಳಲ್ಲಿ ಕೊಡುವ ಗುರಿಯಿದೆ ಎಂದು ಹೇಳಿದರು.

'ಮುಖ್ಯಮಂತ್ರಿ ರೈತ ಚೈತನ್ಯ ಯೋಜನೆ'ಗೆ ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ್ ಚಾಲನೆ ನೀಡಿದರು. ಗ್ರಾಮೀಣ ಭಾಗದ ವಸತಿ ರಹಿತರಿಗೆ ಐದು ಲಕ್ಷ ನಿವೇಶನಗಳ ಹಕ್ಕು ಪತ್ರ ವಿತರಿಸುವ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೊಂದಿಗೆ ಸಹಿ ಹಾಕುವ ಮೂಲಕ ಚಾಲನೆ ನೀಡಿದರು.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ೧೦೦ ದಿನಗಳು ಒಂದು ಸಂಭ್ರಮಾಚರಣೆಯಲ್ಲ; ಈ ದಿನಗಳಲ್ಲಿ ಸರ್ಕಾರ ತೆಗೆದುಕೊಂಡ ನೀತಿ-ನಿರ್ಧಾರಗಳನ್ನು ಜನರ ಮುಂದಿಡುವಂತಹ ಒಂದು ಜವಾಬ್ದಾರಿಯಾಗಿದೆ ಎಂದು ಹೇಳಿದರು.

---

ಪ್ರಸ್ತುತ ಸಾಲಿನ ಪದ್ಮ ಪ್ರಶಸ್ತಿ ಪುರಸ್ಕೃತರನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಲೋಕಭವನದಲ್ಲಿಂದು ಸನ್ಮಾನಿಸಿ, ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗಣ್ಯರ ಸೇವೆ ಮತ್ತು ಸಾಧನೆಗಳು ಸಮಾಜಕ್ಕೆ ಹಾಗೂ ಮುಂದಿನ ಪೀಳಿಗೆಗೆ ಸದಾ ಪ್ರೇರಣೆಯಾಗಿವೆ ಎಂದು ಹೇಳಿದರು.

೨೦೨೬ನೇ ಸಾಲಿನಲ್ಲಿ ರಾಜ್ಯದಿಂದ ಪದ್ಮಭೂಷಣ ಪ್ರಶಸ್ತಿ ಪುರಸ್ಕೃತರಾದ ಶತಾವಧಾನಿ ಡಾ.ಆರ್.ಗಣೇಶ್ ಹಾಗೂ ಪದ್ಮಶ್ರೀ ಪುರಸ್ಕೃತರುಗಳಾದ ಅಂಕೇಗೌಡ ಎಂ., ಡಾ. ಎಸ್.ಜಿ. ಸುಶೀಲಮ್ಮ, ಡಾ. ಪ್ರಭಾಕರ್ ಕೋರೆ, ಶಶಿ ಶೇಖರ್ ವೆಂಪತಿ, ಡಾ. ಶುಭಾ ವೆಂಕಟೇಶ ಅಯ್ಯಂಗಾರ್, ಡಾ. ಸುರೇಶ್ ಹನಗವಾಡಿ ಹಾಗೂ ದಿವಂಗತ ಟಿ.ಟಿ. ಜಗನ್ನಾಥನ್ ಅವರ ಪರವಾಗಿ ಪತ್ನಿ ಲತಾ ಜಗನ್ನಾಥ್ ಅವರುಗಳನ್ನು ರಾಜ್ಯಪಾಲರು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ವಿಧಾನಸಭಾಧ್ಯಕ್ಷರಾದ ಜಿ.ಎಸ್. ಪಾಟೀಲ್, ವಿಧಾನಪರಿಷತ್ತಿನ ಸಭಾಪತಿಗಳಾದ ಸಲೀಂ ಅಹಮದ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

---

ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರ ಸಮರ್ಪಕ ಆಡಳಿತ ನೀಡುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿ, ಭಾರತೀಯ ಜನತಾ ಪಾರ್ಟಿ ಕೈಗೊಂಡಿದ್ದ ಪಾದಯಾತ್ರೆ ಬಳ್ಳಾರಿಯಲ್ಲಿಂದು ಸಮಾರೋಪಗೊಂಡಿತು.

ಬರಗಾಲ ನಿರ್ವಹಣೆಯಲ್ಲಿನ ವಿಫಲತೆ ಒಳಗೊಂಡಂತೆ ವಿವಿಧ ವಿಚಾರಗಳನ್ನು ಮುಂದಿಟ್ಟುಕೊಂಡು ಬಿಜೆಪಿ, ಇದೇ ತಿಂಗಳ ೧ ರಂದು ರಾಯಚೂರು ಜಿಲ್ಲೆಯ ಲಿಂಗಸೂಗೂರಿನಿಂದ ಆರಂಭಿಸಿದ್ದ ೧೮೦ ಕಿಲೋ ಮೀಟರ್ ಪಾದಯಾತ್ರೆ ಇಂದು ಬಳ್ಳಾರಿಯಲ್ಲಿ ಮುಕ್ತಾಯಗೊಂಡಿತು.

ಸಮಾರೋಪ ಸಮಾವೇಶದಲ್ಲಿ ಸಚಿವ ಪ್ರಲ್ಹಾದ್ ಜೋಶಿ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಬಸವರಾಜ್ ಬೊಮ್ಮಾಯಿ, ಸದಾನಂದಗೌಡ, ರಾಜ್ಯ ಉಸ್ತುವಾರಿ ರಾಧಮೋಹನ್, ಬಿಜೆಪಿ ರಾಜ್ಯ ಅಧ್ಯಕ್ಷ ವಿಜಯೇಂದ್ರ, ರಾಜ್ಯದ ಪ್ರತಿ ಪಕ್ಷದ ನಾಯಕರಾದ ಆರ್.ಅಶೋಕ್, ಚಲವಾದಿ ನಾರಾಯಣ ಸ್ವಾಮಿ, ಹಾಲಿ ಮಾಜಿ ಸಂಸದರು, ಶಾಸಕರು ಪಕ್ಷದ ಮುಖಂಡರು ಪಾಲ್ಗೊಂಡಿದ್ದರು.

ಸಮಾವೇಶದಲ್ಲಿ ಮಾತನಾಡಿದ ಮುಖಂಡರು, ಅಧಿಕಾರದಲ್ಲಿರುವ ಕಾಂಗ್ರೆಸ್ ಪಕ್ಷ ಜನಪರ ಆಡಳಿತವನ್ನು ನೀಡುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದರು.

---

ವಿಜಯಪುರ ನಗರದಲ್ಲಿ ಡಿಸೆಂಬರ್ ೧೩ ರಂದು ನಡೆಯಲಿರುವ ವೃಕ್ಷಥಾನ ಹೆರಿಟೇಜ್ ರನ್ ಬೃಹತ್ ಜಾಗೃತಿ ಕಾರ್ಯಕ್ರಮ ಓಟಗಾರರರೆಲ್ಲ ಈಗಲೇ ನೋಂದಾಯಿಸಿ ಭಾಗವಹಿಸುವ ಮೂಲಕ ಯಶಸ್ವಿಗೊಳಿಸಬೇಕು ಎಂದು ವಿಜಯಪುರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ರಿಷಿ ಆನಂದ  ಮನವಿ ಮಾಡಿಕೊಂಡಿದ್ದಾರೆ.

ಕಳೆದ ಆವೃತ್ತಿಯಲ್ಲಿ ಜಿಲ್ಲಾಡಳಿತದ ಸತತ ಸಭೆಗಳಿಂದಾಗಿ ೨೩ ಸಾವಿರ ಸ್ಪರ್ಧಿಗಳು ಭಾಗವಹಿಸಿದ್ದರು. ಈ ಬಾರಿಯ ನೋಂದಾಯಿತ ಓಟಗಾರರ ಸಂಖ್ಯೆಯನ್ನು ೩೦ ಸಾವಿರಕ್ಕೇರಿಸುವ ಗುರಿ ಹೊಂದಲಾಗಿದೆ ಎಂದು ಅವರು ತಿಳಿಸಿದ್ದಾರೆ.

---

ಗರ್ಭಿಣಿಯರು ಮತ್ತು ಬಾಣಂತಿಯರು ತಮ್ಮ ದೈನಂದಿನ ಆಹಾರದಲ್ಲಿ ಅಗತ್ಯ ಪೌಷ್ಠಿಕಾಂಶಗಳು ಇರುವಂತೆ ನೋಡಿಕೊಳ್ಳಬೇಕು ಎಂದು ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶ ನ್ಯಾಯಮೂರ್ತಿ ಸಿ.ಎಸ್. ಶಿವನಗೌಡರ ಹೇಳಿದರು.

ಗದಗ ಜಿಲ್ಲಾ ಆಡಳಿತದ ವತಿಯಿಂದ ಏರ್ಪಡಿಸಲಾಗಿದ್ದ ಪೋಷಣ ಮಾಸಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಮಾತನಾಡಿದ ಅವರು ಮಕ್ಕಳ ಶಾರೀರಿಕ ಹಾಗೂ ಮಾನಸಿಕ ಬೆಳವಣಿಗೆಗೆ ಪೌಷ್ಠಿಕ ಆಹಾರ ಅತ್ಯಂತ ಪ್ರಮುಖವಾಗಿದೆ ಎಂದರು.

---

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ದಾವಣಗೆರೆ ಜಿಲ್ಲೆಯಲ್ಲಿ ಮತದಾರರ ಪಟ್ಟಿವಿಶೇಷ ಸಮಗ್ರ ಪರಿಷ್ಕರಣೆ ವೇಳೆ ಕರಡು ಮತದಾರರ ಪಟ್ಟಿಯಿಂದ ಹೊರಗುಳಿದ ೭೦೮೬ ಮತದಾರರಿಗೆ ನೋಟಿಸ್ ಜಾರಿಗೊಳಿಸಿದ್ದು, ವಿಚಾರಣೆಗಳು ಪ್ರಗತಿಯಲ್ಲಿವೆ ಎಂದು ಜಿಲ್ಲಾ ಚುನಾವಣಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ ತಿಳಿಸಿದ್ದಾರೆ.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ನಂತರ ಆಗಸ್ಟ್ ೨೪ ರಂದು ಜಿಲ್ಲೆಯ ೭ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಕರಡು ಪಟ್ಟಿಯನ್ವಯ ಒಟ್ಟು ೧೨ ಲಕ್ಷದ ೯೮ ಸಾವಿರದ ೨೧೯ ಮತದಾರರು ಇದ್ದಾರೆ ಎಂದು ಅವರು ಹೇಳಿದ್ದಾರೆ.

ನೋಟೀಸ್ ಆಧಾರಿತ ಸುಮಾರು ಒಂದು ಸಾವಿರ ಪ್ರಕರಣಗಳನ್ನು ಅಂತಿಮ ಪ್ರಕಟಣೆಗಾಗಿ ಕಾಯ್ದಿರಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ತಿಳಿಸಿದ್ದಾರೆ.

ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ-೨೦೨೬ರ ಕರಡು ಮತದಾರರ ಪಟ್ಟಿ ಪ್ರಕಟಣೆಗೆ ಸಂಬಂಧಿಸಿದಂತೆ ಕೊಪ್ಪಳ ಜಿಲ್ಲಾ ಚುನಾವಣಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅಧ್ಯಕ್ಷತೆಯಲ್ಲಿಂದು ಜಿಲ್ಲೆಯ ಮಾನ್ಯತೆ ಪಡೆದ ಮತ್ತು ನೋಂದಾಯಿತ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆ ನಡೆಯಿತು.

---

ಸಂಕ್ಷಿಪ್ತ ಸುದ್ದಿ

೧. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಗಣೇಶ ಪ್ರತಿಷ್ಠಾಪನೆಗೆ, ಸಂಬಂಧಪಟ್ಟ ಇಲಾಖೆಗಳಿಂದ ಅನುಮತಿ ಪಡೆಯುವುದು ಕಡ್ಡಾಯವಾಗಿದ್ದು, ಸರ್ಕಾರದ ಸೂಚನೆಯಂತೆ ಡಿ.ಜೆ

ಬಳಸಲು ಯಾವುದೇ ಕಾರಣಕ್ಕೂ ಅನುಮತಿ ಇಲ್ಲ ಎಂದು ಉಪ ಪೊಲೀಸ್ ವರಿಷ್ಠಾಧಿಕಾರಿ ಪಾಂಡುರಂಗ ಸ್ಪಷ್ಟಪಡಿಸಿದ್ದಾರೆ.

೧. ಉತ್ತರ ಕನ್ನಡ ಜಿಲ್ಲೆಯಲ್ಲಿ ಗಣೇಶ ಚತುರ್ಥಿ ಹಬ್ಬದ ಹಿನ್ನೆಲೆಯಲ್ಲಿ ಶಾಂತಿಯುತ ಹಾಗೂ ಪರಿಸರ ಸ್ನೇಹಿ ಆಚರಣೆಗೆ ಎಲ್ಲಾ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಪಿಓಪಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಮತ್ತು ಡಿಜೆ ಬಳಕೆಯನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಹೇಳಿದ್ದಾರೆ.

__________ ಮುಕ್ತಾಯ ___________